ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ತಾಂ.ಮ/ 96 /2016-17

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 03/03/2017

ಆಡಳಿತಾತ್ಮಕ ಅನುಮೋದನೆ

ವಿಷಯ:- **Improvements to roads, drains and Drilling borewells in ward no. 09, 10 & 11 of Vidyaranyapura sub division of Byatarayanapura Division.**

ಉಲ್ಲೇಖ:1. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 009-16-000027

2. ಸರ್ಕಾರದ ಆದೇಶ ಸಂಖ್ಯೆ ಸ.ಅ.ಇ:449:ಎಸ್.ಎಫ್.ಸಿ:2015 ಬೆಂಗಳೂರು ದಿನಾಂಕ:24.11.2015

3. ಆಯುಕ್ತರು ಬಿಬಿಎಂಪಿ ರವರ ಪತ್ರದ ಸಂಖ್ಯೆ:ಮುಅ/ರಮೂಸೌ)/ಪಿ.ಆರ್/ 2056/2015-16 ದಿ:13.01.2016

4. Govt Order No. ನಅಇ.05 ಎಂಎನ್‌ವೈ 2017 ದಿನಾಂಕ:17.02.2017 ರಲ್ಲಿ ಆಡಳಿತಾತ್ಮಕ ಅನುಮೋದನೆ ಅನುಮೋದಿಸಿರುವಂತೆ

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯಾರಣ್ಯಪುರ ಉಪ ವಿಭಾಗ) ರವರು 2015-16ನೇ ಸಾಲಿನ ದರಪಟ್ಟಿಯಂತೆ **ಪಿ-3106 "Nagarothana Grant works"** ಅನುದಾನದಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ, 305.00 ಲಕ್ಷಗಳಿಗೆ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಉಲ್ಲೇಖ(4)ರಂತೆ ದೊರೆತಿದ್ದು ಆಡಳಿತಾತ್ಮಕ ಅನುಮೋದನೆ ಮೆಮೋ ಸಿದ್ದಪಡಿಸಿ ಸಹಿಗಾಗಿ ಸಲ್ಲಿಸಿದೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 15 ಕ್ರ.ಸಂ 96 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

3/03
ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

03/03
1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.